**All India Radio: Bangalore**
**Regional Bulletin In Kannada**
**18.12.2025 / 6.40 p.m.**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**18.12.2025 / 6.40 p.m.**
*******************

ಮುಖ್ಯಾಂಶಗಳು

೧. ವಿಧಾನಸಭೆಯಲ್ಲಿ ದ್ವೇಷ ಭಾಷಣ ಮಸೂದೆ ಅಂಗೀಕಾರ; ಪ್ರತಿಪಕ್ಷಗಳಿಂದ ವಿಧೇಯಕದ ಪ್ರತಿ ಹರಿದು ಅಸಮಾಧಾನ

೨. ಬಿ.ಪಿ.ಎಲ್ ಕಾರ್ಡ್ ಆದಾಯ ಮಿತಿ ಪರಿಷ್ಕರಣೆಗೆ ಸರ್ಕಾರ ಚಿಂತನೆ

೩. ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಯೋಜನೆಯಲ್ಲಿ ಬದಲಾವಣೆ ಅಸಾಧ್ಯ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೪. ಪೊಲೀಸ್ ಇಲಾಖೆಯಲ್ಲಿ ೩ ಸಾವಿರದ ೬೦೦ ಖಾಲಿ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆ ಒಪ್ಪಿಗೆ

೫. ಬೇಲೂರಿನ ೬ ಕಿಲೋಮೀಟರ್ ಅರಣ್ಯ ಜಾಗದಲ್ಲಿ ಕಾಮಗಾರಿ ಪೂರ್ಣಗೊಂಡರೆ, ೨೦೨೬ರಲ್ಲಿ ತುಮಕೂರು ಜಿಲ್ಲೆಗೆ ಎತ್ತಿನಹೊಳೆ ನೀರು

***************

ಬೆಳಗಾವಿಯಲ್ಲಿ ನಡೆಯುತ್ತಿರುವ ಅಧಿವೇಶನದಲ್ಲಿ ವಿಪಕ್ಷಗಳ ವಿರೋಧದ ನಡುವೆಯೇ ವಿಧಾನಸಭೆಯಲ್ಲಿಂದು ದ್ವೇಷ ಭಾಷಣ ಮಸೂದೆ ಅಂಗೀಕಾರಗೊಂಡಿದೆ. ವಿಧೇಯಕದ ಪ್ರತಿ ಹರಿದು ಪ್ರತಿಪಕ್ಷಗಳು ಆಕ್ರೋಶ ವ್ಯಕ್ತಪಡಿಸುತ್ತಿದ್ದಂತೆಯೇ ಸರ್ಕಾರ ಮಸೂದೆಯನ್ನು ಅಂಗೀಕರಿಸಿದೆ.

ಇದಕ್ಕೂ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಮಾತನಾಡಿ, ಈ ವಿಧೇಯಕವು, ಸಮಾಜದ ಸಾಮರಸ್ಯ ಪಾಲನೆಗೆ ಸಹಾಯಕವಾಗಲಿದೆ. ವಿಧೇಯಕದಲ್ಲಿ ಹತ್ತು ವರ್ಷಗಳವರೆಗೆ ಕಾರಾಗೃಹ ವಾಸ ಎಂಬ ಅಂಶವಿತ್ತು. ಅದನ್ನು ಏಳು ವರ್ಷಗಳಿಗೆ ಕಡಿತಗೊಳಿಸುವುದಾಗಿ ತಿಳಿಸಿದ್ದಾರೆ.

ಸಮಾಜದಲ್ಲಿ ದ್ವೇಷವನ್ನುಂಟು ಮಾಡುವ ದ್ವೇಷ ಭಾಷಣದ ಪ್ರಸರಣೆ, ಪ್ರಕಟಣೆ ಅಥವಾ ಪ್ರಚಾರವನ್ನು ಹಾಗೂ ಅಪರಾಧಗಳನ್ನು ತಡೆಗಟ್ಟಲು ಮತ್ತು ಪ್ರತಿಬಂಧಿಸಲಿದೆ.

ಅಂತಹ ಅಪರಾಧಗಳಿಗೆ ದಂಡನೆಯನ್ನು ವಿಧಿಸಲು ಹಾಗೂ ಹಾನಿಗೊಳಗಾದ ಸಂತ್ರಸ್ತರಿಗೆ ಪರಿಹಾರವನ್ನು ಒದಗಿಸಲು ಈ ಶಾಸನ ಅವಶ್ಯಕವೆಂದು ಪರಿಗಣಿಸಿ ಈ ವಿಧೇಯಕವನ್ನು ತರಲಾಗಿದೆ. ವಿಧೇಯಕವನ್ನು ಪರ್ಯಾಲೋಚಿಸಿ ಅನುಮೋದನೆ ನೀಡುವಂತೆ ಗೃಹ ಸಚಿವರು ಕೋರಿದರು.

ಈ ವೇಳೆ, ಗದ್ದಲದ ನಡುವೆ ಧ್ವನಿ ಮತದ ಅಂಗೀಕಾರ ದೊರೆತಿದೆ ಎಂದು ಸಭಾಧ್ಯಕ್ಷ ಘೋಷಿಸಿದರು.

***************

ಬಿ.ಪಿ.ಎಲ್.ಕಾರ್ಡ್ ಆದಾಯ ಮಿತಿ ಪರಿಷ್ಕರಣೆಗೆ ಸರ್ಕಾರ ಚಿಂತನೆ ನಡೆಸಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ.

ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿಂದು ಬಂಟ್ವಾಳ ಶಾಸಕ ರಾಜೇಶ್ ನಾಯಕ್ ಹಾಗೂ ಶ್ರವಣಬೆಳಗೊಳ ಶಾಸಕ ಬಾಲಕೃಷ್ಣ.ಸಿ.ಎನ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಬಿ.ಪಿ.ಎಲ್ ಕಾರ್ಡ್‌ದಾರರ ಆದಾಯ ಮಿತಿಯನ್ನು ೧ ಲಕ್ಷ ೨೦ ಸಾವಿರ ರೂಪಾಯಿಗೆ ಮಿತಿಗೊಳಿಸಿದೆ. ಆದರೆ ಕೂಲಿ ಕೆಲಸಗಾರರಿಗೂ ಪ್ರತಿದಿನ ೫೦೦ ರೂಪಾಯಿ ಕೂಲಿ ದೊರೆಯುತ್ತದೆ. ಇದರ ಆಧಾರದಲ್ಲಿ ಕೂಲಿ ಮಾಡುವವರ ಆದಾಯವೂ ವರ್ಷಕ್ಕೆ ೧ ಲಕ್ಷ ೮೦ ಸಾವಿರ ರೂಪಾಯಿಗೂ ಅಧಿಕವಾಗುತ್ತಿದೆ. ಈ ಹಿನ್ನಲೆಯಲ್ಲಿ ಪರಿಷ್ಕರಿಸಲು ಚಿಂತನೆ ನಡೆದಿದೆ ಎಂದು ಹೇಳಿದ್ದಾರೆ.

ತಾತ್ಕಾಲಿಕವಾಗಿ ಯಾವುದೇ ಬಿ.ಪಿ.ಎಲ್.ಕಾರ್ಡುಗಳನ್ನು ರದ್ದು ಮಾಡದಂತೆ ಅಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.

ಸದ್ಯ ವೈದ್ಯಕೀಯ ಆಧಾರದಲ್ಲಿ ಮಾತ್ರ ಬಿ.ಪಿ.ಎಲ್ ಕಾರ್ಡ್ ಪಡೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದ್ದಾರೆ.

***************

ವಿಧಾನಸಭೆಯಲ್ಲಿಂದು ಸಚಿವ ಹೆಚ್.ಸಿ.ಮಹದೇವಪ್ಪ ಪರಿಶಿಷ್ಟ ಜಾತಿಗಳಲ್ಲಿನ ಒಳ ಮೀಸಲಾತಿ ತಿದ್ದುಪಡಿ ವಿಧೇಯಕವನ್ನು ಪರ್ಯಾಲೋಚನೆಗೆ ಮಂಡಿಸಿದರು. ಸುಪ್ರೀಂಕೋರ್ಟ್ ಆದೇಶದ ಬಳಿಕ ರಾಜ್ಯದಲ್ಲಿ ಏಕಸದಸ್ಯ ಆಯೋಗ ರಚನೆ ಮಾಡಿ ಅದರ ಶಿಫಾರಸ್ಸಿನ ಅನುಸಾರ ಪರಿಶಿಷ್ಟ ಜಾತಿಗಳಲ್ಲಿನ ಒಳಮೀಸಲಾತಿಯನ್ನು ವರ್ಗೀಕರಣ ಮಾಡಲಾಗಿದೆ. ಶಿಕ್ಷಣ ಮತ್ತು ಸರ್ಕಾರಿ ಹುದ್ದೆಗಳ ನೇಮಕಾತಿಯಲ್ಲಿ ಪರಿಶಿಷ್ಟರ ಎಲ್ಲಾ ಜಾತಿಗಳ ನಡುವೆ ಸಮಾನ ಅವಕಾಶ ದೊರಕಿಸಲು ತಿದ್ದುಪಡಿ ವಿಧೇಯಕ ರೂಪಿಸಿರುವುದಾಗಿ ತಿಳಿಸಿದರು.

ಅರವಿಂದ ಬೆಲ್ಲದ್ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿ, ತಮ್ಮ ಸರ್ಕಾರ ಪರಿಶಿಷ್ಟ ಜಾತಿಗಳಲ್ಲಿ ಒಳ ಮೀಸಲಾತಿ ಜಾರಿಗೆ ತಂದಿತ್ತು. ಅದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರೋಧಿಸಿದ್ದರು ಎಂದರು.

ಈ ವೇಳೆ, ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಇರಬೇಕು. ಮೀಸಲಾತಿ ಶೇಕಡಾ ೫೦ಕ್ಕೆ ಸೀಮಿತವಾಗಬಾರದು, ಶೇಕಡಾ ೭೫ಕ್ಕೆ ಹೆಚ್ಚಳವಾಗಬೇಕು ಎಂದು ಪ್ರತಿಪಾದಿಸುತ್ತೇನೆ. ಆರ್ಥಿಕವಾಗಿ ಹಿಂದುಳಿದವರಿಗೆ ಮೀಸಲಾತಿ ನೀಡಲು ಸಂವಿಧಾನದಲ್ಲಿ ಅವಕಾಶ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಕೇಂದ್ರ ಸರ್ಕಾರ ಇಡಬ್ಲ್ಯೂಎಸ್ ಜಾರಿಗೆ ತಂದಿದೆ. ಪರಿಶಿಷ್ಟ ಜಾತಿಗೆ ಶೇಕಡಾ ೧೭ರಷ್ಟು, ಪರಿಶಿಷ್ಟ ವರ್ಗಕ್ಕೆ ಶೇಕಡಾ ೭ರಷ್ಟು ಮೀಸಲಾತಿ ಹೆಚ್ಚಳವನ್ನು ತಾವು ಎಂದಿಗೂ ವಿರೋಧ ಮಾಡಿಲ್ಲ ಎಂದು ತಿಳಿಸಿದ್ದಾರೆ.

***************

ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ೩ ಸಾವಿರದ ೬೦೦ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯಿಂದ ಒಪ್ಪಿಗೆ ದೊರೆತಿದ್ದು, ಅಧಿಸೂಚನೆ ಹೊರಡಿಸುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ಪರಿಷತ್‌ನಲ್ಲಿಂದು ಒಳ ಮೀಸಲಾತಿ ಪ್ರಕ್ರಿಯೆ ಪೂರ್ವದಲ್ಲೇ ಅಧಿಸೂಚನೆ ಹೊರಡಿಸಿದ್ದರಿಂದ ಈಗಾಗಲೇ ೯೪೭ ಪಿಎಸ್‌ಐಗಳ ಭರ್ತಿ ಪ್ರಕ್ರಿಯೆ ಪೂರ್ಣಗೊಂಡು ಅಭ್ಯರ್ಥಿಗಳು ತರಬೇತಿಯಲ್ಲಿದ್ದಾರೆ.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಅನುದಾನದಡಿಯಲ್ಲಿ ಕಾಳಗಿ ತಾಲೂಕಿನಲ್ಲಿ ಸಿಪಿಐ ಕಚೇರಿ ಕಟ್ಟಡ ಮತ್ತು ಸಿಪಿಐ ಸಿಬ್ಬಂದಿಗೆ ವಸತಿ ಗೃಹ ನಿರ್ಮಾಣಕ್ಕೆ ಅವಕಾಶ ಕಲ್ಪಿಸಲಾಗುವುದು ಎಂದು ಸಚಿವರು ಇದೇ ವೇಳೆ ತಿಳಿಸಿದ್ದಾರೆ.

***************

ವಿಧಾನಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕಾರ ರೂಪದಲ್ಲಿರುವ ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕ -೨೦೨೫ಕ್ಕೆ ಮೇಲ್ಮನೆಯಲ್ಲಿ ಅಂಗೀಕಾರ ದೊರೆತಿದೆ.

ನಾಡಪ್ರಭು ಕೆಂಪೇಗೌಡ ಪಾರಂಪರಿಕ ತಾಣ ಅಭಿವೃದ್ಧಿ ಪ್ರಾಧಿಕಾರ ತಿದ್ದುಪಡಿ ವಿಧೇಯಕಕ್ಕೂ ಅಂಗೀಕಾರ ದೊರೆತಿದೆ.

ಮೇಲ್ಮನೆಯಲ್ಲಿ ಪ್ರಶ್ನೋತ್ತರ ಕಲಾಪದಲ್ಲಿ ಉತ್ತರಿಸಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಯೋಜನೆಗೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್ ಆದೇಶವಿರುವ ಹಿನ್ನೆಲೆಯಲ್ಲಿ ಯೋಜನೆಯಲ್ಲಿ ಯಾವುದೇ ಬದಲಾವಣೆ ತರಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

***************

ಎತ್ತಿನ ಹೊಳೆ ಯೋಜನೆಯ ಸುಮಾರು ೨೫೨ ಕಿಲೋಮೀಟರ್ ನಾಲಾ ಕಾಮಗಾರಿಯಲ್ಲಿ ೨೩೫ ಕಿಲೋಮೀಟರ್ ಕಾಮಗಾರಿ ಪೂರ್ಣಗೊಂಡಿದೆ ಎಂದು ವಿಶ್ವೇಶ್ವರಯ್ಯ ಜಲ ನಿಗಮದ ಎತ್ತಿನಹೊಳೆ ಯೋಜನೆಯ ಮುಖ್ಯ ಇಂಜಿನಿಯರ್ ಆನಂದ ತಿಳಿಸಿದ್ದಾರೆ.

ಹಾಸನ ಜಿಲ್ಲೆ ಬೇಲೂರು ತಾಲೂಕಿನ ಆರು ಕಿಲೋಮೀಟರ್ ಅರಣ್ಯ ಜಾಗದಲ್ಲಿ ನಾಲಾ ಕಾಮಗಾರಿ ಪೂರ್ಣಗೊಂಡರೆ ೨೦೨೬ರ ಜೂನ್ ವೇಳೆಗೆ ತುಮಕೂರು ಜಿಲ್ಲೆಗೆ ಎತ್ತಿನಹೊಳೆ ನೀರು ಹರಿಯಲಿದೆ ಎಂದು ಹೇಳಿದ್ದಾರೆ.

ಎತ್ತಿನಹೊಳೆಗೆ ಯೋಜನೆಯಿಂದ ಒಟ್ಟು ೨೪.೭೮ ಟಿ.ಎಂ.ಸಿ ನೀರು ಹಾಸನ, ಚಿತ್ರದುರ್ಗ, ತುಮಕೂರು, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ನಿಗದಿಪಡಿಸಿದಂತೆ ಹರಿಸಲು ಎಲ್ಲಾ ರೀತಿಯ ಯೋಜನೆಗಳನ್ನು ಮಾಡಿಕೊಳ್ಳಲಾಗಿದೆ.

ಈಗಾಗಲೇ ೦೬-೦೯-೨೦೨೪ರಲ್ಲಿ ಒಂದು ಹಂತದಲ್ಲಿ ನೀರನ್ನು ಲಿಫ್ಟ್ ಮಾಡಿ, ವಾಣಿವಿಲಾಸ ಡ್ಯಾಂ ತುಂಬಿಸಲಾಗಿದೆ. ಕೇಂದ್ರ ಅರಣ್ಯ ಇಲಾಖೆ ಆಕ್ಷೇಪ ವ್ಯಕ್ತಪಡಿಸಿರುವ ಆರು ಕಿಲೋಮೀಟರ್ ಅರಣ್ಯ ಭೂಮಿಯಲ್ಲಿ ನಾಲೆ ಮಾಡಲು ಅನುಮೋದನೆ ದೊರೆತರೆ ನಿಗದಿಯಂತೆ ನೀರು ಹರಿಯುವುದರಲ್ಲಿ ಯಾವುದೇ ಅನುಮಾನವಿಲ್ಲ ಎಂದು ಹೇಳಿದ್ದಾರೆ.

***************

ನಗರಾಭಿವೃದ್ಧಿ ಇಲಾಖೆ, ಪೌರಾಡಳಿತ ನಿರ್ದೇಶನಾಲಯ ಹಾಗೂ ಬೆಳಗಾವಿ ಮಹಾನಗರಪಾಲಿಕೆ ಸಂಯುಕ್ತಾಶ್ರಯದಲ್ಲಿ ಸುವರ್ಣಸೌಧದಲ್ಲಿ ಇ-ಖಾತಾ ಲೋಕಾರ್ಪಣೆ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು.

ಇದೇ ವೇಳೆ ಪೌರ ಕಾರ್ಮಿಕರಿಗೆ ನೇಮಕಾತಿ ಆದೇಶ ಮತ್ತು ಮನೆಯ ಹಕ್ಕು ಪತ್ರಗಳ ವಿತರಣೆಯ ಕಾರ್ಯಕ್ರಮಕ್ಕೂ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಸಭಾಧ್ಯಕ್ಷರಾದ ಬಸವರಾಜ ಹೊರಟ್ಟಿ, ಸಚಿವರಾದ ಬೈರತಿ ಸುರೇಶ್, ರಹೀಂಖಾನ್, ಎಂ.ಸಿ.ಸುಧಾಕರ್, ಕಾನೂನು ಸಲಹೆಗಾರರಾದ ಪೊನ್ನಣ್ಣ, ವಿಧಾನಪರಿಷತ್ ಮುಖ್ಯ ಸಚೇತಕರಾದ ಸಲೀಂಅಹಮದ್, ವಿಧಾನ ಪರಿಷತ್ ಸದಸ್ಯ ಐವಾನ್ ಡಿಸೋಜಾ, ಶಾಸಕರಾದ ಶ್ರೀನಿವಾಸ್ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

***************

ರಾಷ್ಟ್ರೀಯ ಪಿಂಚಣಿ ವ್ಯವಸ್ಥೆ ಶಿಸ್ತು ಬದ್ಧ ನಿವೃತ್ತಿ ಉಳಿತಾಯ, ವೈವಿಧ್ಯಮಯ ಹೂಡಿಕೆ ಮತ್ತು ಆರ್ಥಿಕ ಸ್ಥಿತಿಸ್ಥಾಪಕತ್ವವನ್ನು ಉತ್ತೇಜಿಸುವ ಮೂಲಕ ಆರ್ಥಿಕ ಭದ್ರತೆಯನ್ನು ಬಲಪಡಿಸುವ ಗುರಿಯನ್ನು ಹೊಂದಿದೆ ಎಂದು ಪಿಂಚಣಿ ನಿಧಿ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಶಿವಸುಬ್ರಮಣಿಯನ್ ರಾಮನ್ ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರಿನಲ್ಲಿಂದು ರಾಷ್ಟ್ರೀಯ ಪಿಂಚಣಿ ವ್ಯವಸ್ಥೆಯ ಕುರಿತಂತೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾರ್ವಜನಿಕ ಹಿತಾಸಕ್ತಿಯ ದೃಷ್ಟಿಯಿಂದ ನೂತನ ಪಿಂಚಣಿ ಯೋಜನೆಯ ಬಗ್ಗೆ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ತಿಳಿಸಿದ್ದಾರೆ.

ಪರಿಷ್ಕೃತ ನಿಯಮಗಳು ನೂತನ ಪಿಂಚಿನ ಯೋಜನೆಯ ಬಗ್ಗೆ ಸಮಗ್ರ, ಚಂದಾದಾರ ಸ್ನೇಹಿ ಮತ್ತು ನಾಗರಿಕರ ವಿಕಸನಗೊಳ್ಳುತ್ತಿರುವ ನಿವೃತ್ತಿ ಅಗತ್ಯಗಳಿಗೆ ಅನುಗುಣವಾಗಿ ಮಾಡುವ ಗುರಿಯನ್ನು ಹೊಂದಿದೆ ಎಂದು ಹೇಳಿದ್ದಾರೆ.

***************

ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆಯನ್ನು ಸಮರ್ಪಕಗೊಳಿಸಲು ೧ ಸಾವಿರದ ೨೦೦ ಕೋಟಿ ರೂಪಾಯಿಗಳ ಯೋಜನೆಯನ್ನು ಸಿದ್ಧಪಡಿಸಲಾಗುತ್ತಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ. ತಿಳಿಸಿದ್ದಾರೆ.

ಮಂಗಳೂರು ಮಹಾನಗರ ಪಾಲಿಕೆ ಸಭಾಂಗಣದಲ್ಲಿಂದು ನಡೆದ ಫೋನ್ ಇನ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹೊಸ ಯೋಜನೆಯಲ್ಲಿ ಮನೆ, ಅಪಾರ್ಟ್‌ಮೆಂಟ್‌ಗಳ ಕೊಳಚೆ ನೀರನ್ನು ಸಮರ್ಪಕವಾಗಿ ವಿಲೇವಾರಿಗೊಳಿಸಲು ಆದ್ಯತೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

*******ಮುಕ್ತಾಯ*******